ಉ) ಬೀದರ್ ಜಿಲ್ಲೆಗೆ 2011–12ನೇ ಸಾಲಿನಲ್ಲಿ ರೂ. 850.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಹುಮ್ನಾಬಾದ್ ಮತಕ್ಷೇತ್ರಕ್ಕೆ ಕುಡಿಯುವ ನೀರಿನ ಅಭಾವವನ್ನು ನೀಗಿಸಲು ಹೆಚ್ಚಿನ ಆದ್ಯತೆ ನೀಡಿ, ಹಣವನ್ನು ಬಿಡುಗಡೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗುವುದು.

ಇಂಡೋರ್ ಸ್ಟೇಡಿಯಂ ಹೆಲ್ತ್‌ಕ್ಲಬ್ ಹಾಗೂ ಈಜುಕೊಳ ನಿರ್ಮಾಣ

156

ಡಾ: ಬಗಲಿ ಸಾರ್ವಭೌಮ ಸಾತಗೌಡ (ಇಂಡಿ)

ಅ) ಇಂಡಿ ಪಟ್ಟಣದಲ್ಲಿ Indore Stadium, Fitness Centre (Health Club); ಈಜುಕೊಳ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದರೆ ಈ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು ?

ಡಿ. ವಿ. ಸದಾನಂದಗೌಡ (ಮುಖ್ಯಮಂತ್ರಿಗಳು)

ಅ) ಮಾನ್ಯ ಸದಸ್ಯರು ದಿನಾಂಕ : 17.02.2012 ರಂದು ತಮ್ಮ ಪತ್ರದ ಮೂಲಕ ಬೇಡಿಕೆ ಸಲ್ಲಿಸಿರುತ್ತಾರೆ. ಆದರೆ, ಈ ಕುರಿತು ಜಿಲ್ಲಾಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದು, ಅಂದರೆ, ನಕ್ಷೆ ಮತ್ತು ಅಂದಾಜು ಪಟ್ಟಿಯನ್ನು ಪಡೆದುಕೊಂಡು ಪರಿಶೀಲಿಸಲಾಗುವುದು

ಆ) ಪ್ರಸ್ತಾವನೆ ಬಂದ ನಂತರ ಪರಿಶೀಲಿಸಲಾಗುವುದು.

ಆಯವ್ಯಯದಲ್ಲಿ ಒದಗಿಸಿದ ಅನುದಾನ 55 : (95)

ಡಾ: ಗೂಳಿಹಟ್ಟಿ ಡಿ. ಶೇಖರ್ (ಹೊಸದುರ್ಗ)

ಅ) ಕಳೆದ ಮೂರು ವರ್ಷಗಳಲ್ಲಿ ವಿವಿಧ ಇಲಾಖೆಗಳಿಗೆ ಆಯವ್ಯಯದಲ್ಲಿ ಒದಗಿಸಿದ ಅನುದಾನವೆಷ್ಟು ಹಾಗೂ ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ಯಾವ್ಯಾವುದಕ್ಕೆ ಖರ್ಚಾಗಿರುತ್ತೆ;

ಆ) ಆಯವ್ಯಯದಲ್ಲಿ ಒದಗಿಸಿದ ಅನುದಾನ ಅನುಷ್ಠಾನವಾಗದೇ ಇರಲು ಕಾರಣಗಳೇನು?

ಡಿ. ವಿ. ಸದಾನಂದಗೌಡ (ಮುಖ್ಯಮಂತ್ರಿಗಳು)

ಅ) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಆಯವ್ಯಯದಲ್ಲಿ ಒದಗಿಸಿದ ಅನುದಾನವನ್ನು ಕಾರ್ಯಕ್ರಮಕ್ಕನುಗುಣವಾಗಿ ಬಿಡುಗಡೆ ಮಾಡಲಾಗುತ್ತದೆ.